**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

**कर्नाटक-संस्कृत-विश्वविद्यालय:**
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

ಸಂಖ್ಯೆ: ಕಸಂವಿ/ಪ್ರ.ಸ./2017–18 |181–26 ದಿನಾಂಕ: 22.08.2017

ಮಾನ್ಯರೇ,

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ ಮೂವತ್ತೊಂಭತ್ತನೆಯ** ಸಭೆಯು ದಿನಾಂಕ: **19.08.2017**ರ **ಶನಿವಾರ ಮಧ್ಯಾಹ್ನ 2.30 ಗಂಟೆಗೆ** ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಸಭೆಯ ಅಧ್ಯಕ್ಷತೆಯನ್ನು ಮಾನ್ಯ ಕುಲಪತಿಗಳು ವಹಿಸಿದ್ದರು. ಈ ಪತ್ರದೊಂದಿಗೆ ಆ ದಿನ ನಡೆದ ಸಭೆಯ ನಡಾವಳಿಯನ್ನು ತಮ್ಮ ಅವಗಾಹನೆಗೆ ಕಳುಹಿಸಿಕೊಡಲಾಗಿದೆ.

ಈ ಸಭೆಯ ನಡಾವಳಿಗಳಿಗೆ ಆಕ್ಷೇಪಣೆಗಳೇನಾದರೂ ಇದ್ದಲ್ಲಿ ಈ ಪತ್ರ ತಲುಪಿದ ದಿನಾಂಕದಿಂದ ಹತ್ತು ದಿನಗಳೊಳಗಾಗಿ ಸಲ್ಲಿಸಲು ಕೋರಲಾಗಿದೆ.

ವಂದನೆಗಳೊಂದಿಗೆ,

Shilpa
ಕುಲಸಚಿವರು

ಇವರಿಗೆ,

1. **ಶ್ರೀಮತಿ ಸುಜಾತ ಗೌಡ**, # 30, 7ನೇ ಹಂತ, 2ನೇ ಮುಖ್ಯರಸ್ತೆ, ಬಿ.ಇ.ಎಂ.ಎಲ್. ಲೇಔಟ್, ಮೈಲಸಂದ್ರ, ಕೆಂಗೇರಿ, ಬೆಂಗಳೂರು – 560059.
2. **ಶ್ರೀ ಶಿವಕುಮಾರ್ ಎನ್.**, # 109, 2ನೇ ಮುಖ್ಯರಸ್ತೆ, 5ನೇ ಅಡ್ಡರಸ್ತೆ, ಪಾಂಡುರಂಗ ಬಡಾವಣೆ, ಅರಕೆರೆ ಗೇಟ್, ಬನ್ನೇರುಘಟ್ಟ ರಸ್ತೆ, ಬೆಂಗಳೂರು – 560076.
3. **ವಿದ್ವಾನ್ ಕೆ. ಭೀಮಪ್ಪ**, ನಂ. 26, ಅಂಬೇಡ್ಕರ್ ಕಲ್ಯಾಣ ಮಂಟಪದ ಹತ್ತಿರ, ರಾಜೇಂದ್ರ ನಗರ, ಚಿತ್ರದುರ್ಗ ಜಿಲ್ಲೆ.
4. **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ**, ರಾಮಪುರ, ರಬಕವಿ, ಜಮಖಿಂಡಿ ತಾಲ್ಲೂಕು, ಬಾಗಲಕೋಟೆ ಜಿಲ್ಲೆ.
5. **ಪ್ರೊ. ಮೈಕೆಲ್**, ಸಂಸ್ಕೃತ ಪ್ರಾಧ್ಯಾಪಕರು, ಗುಲ್ಬರ್ಗಾ ವಿಶ್ವವಿದ್ಯಾಲಯ, ಜ್ಞಾನಗಂಗಾ, ಕಲಬುರಗಿ–585106.
6. **ಶ್ರೀಮತಿ ಜಯಶ್ರೀ ವಿ. ಕೊರತಿ**, ಕೆನರಾ ವೆಲ್‌ಫೇರ್ ಟ್ರಸ್ಟ್ ಎಜುಕೇಷನ್ ಕಾಲೇಜು, ದಾಂಡೇಲಿ, ಉತ್ತರ ಕನ್ನಡ ಜಿಲ್ಲೆ – 581325
7. ವಿದ್ವಾನ್ ಎಂ. ಸಿದ್ಧಮಲ್ಲ ಸ್ವಾಮಿ, ನಂ. 136/1, ಶ್ರೀ ನೀಲಕಂಠಸ್ವಾಮಿ ಮಠ, ಹರಿಶ್ಚಂದ್ರ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು–570009.
8. **ಶ್ರೀ ಗಜಾನನ ಲಕ್ಷ್ಮೀನಾರಾಯಣ ಭಟ್ಟ**, ಉಮ್ಮಚಗಿ, ಯಲ್ಲಾಪುರ ತಾಲ್ಲೂಕು, ಉತ್ತರ ಕನ್ನಡ ಜಿಲ್ಲೆ – 581347
9. **ಡಾ. ಕೆ. ಸುಧಾಕರ್**, ನಂ. 346/347, 'ಪ್ರೇಮವಿಲ್ಲಾ', 14ನೇ ಮುಖ್ಯರಸ್ತೆ, ಆರ್.ಎಂ.ವಿ. ಬಡಾವಣೆ, ಸದಾಶಿವನಗರ, ಬೆಂಗಳೂರು–80.
10. **ಕ್ಯಾಪ್ಟನ್ ಗಣೇಶ್ ಕಾರ್ಣಿಕ್**, ರೂಮ್ ನಂ. 145, 1ನೇ ಮಹಡಿ, ವಿಧಾನಸೌಧ, ಬೆಂಗಳೂರು–560001.
11. **ಪ್ರಧಾನ ಕಾರ್ಯದರ್ಶಿಗಳು**, ಉನ್ನತ ಶಿಕ್ಷಣ (ವಿಶ್ವವಿದ್ಯಾಲಯ), ಬಹುಮಹಡಿಗಳ ಕಟ್ಟಡ, ಬೆಂಗಳೂರು–560001
12. **ಅಪರ ಮುಖ್ಯ ಕಾರ್ಯದರ್ಶಿಗಳು**, ಹಣಕಾಸು ಇಲಾಖೆ, ವಿಧಾನಸೌಧ, ಬೆಂಗಳೂರು–560001
13. **ಸರ್ಕಾರದ ಕಾರ್ಯದರ್ಶಿ**, ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ) ಕರ್ನಾಟಕ ಸರ್ಕಾರದ ಸಚಿವಾಲಯ, ಬಹುಮಹಡಿ ಕಟ್ಟಡ, ಬೆಂಗಳೂರು–560001
14. **ಪ್ರಾದೇಶಿಕ ನಿರ್ದೇಶಕರು**, ಯುಜಿಸಿ–ನೈರುತ್ಯ ಪ್ರಾದೇಶಿಕ ಕೇಂದ್ರ, ಪ್ರಸನ್ನಕುಮಾರ್ ಬ್ಲಾಕ್, ಅರಮನೆ ರಸ್ತೆ, ಬೆಂಗಳೂರು–09,
15. **ನಿರ್ದೇಶಕರು**, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಅರಮನೆ ಆವರಣ, ಮೈಸೂರು–570001.
16. **ಆಯುಕ್ತರು**, ಕನ್ನಡ ಮತ್ತು ಸಂಸ್ಕೃತಿ ನಿರ್ದೇಶನಾಲಯ, ಕನ್ನಡ ಭವನ, ಜೆ.ಸಿ. ರಸ್ತೆ, ಬೆಂಗಳೂರು–560002.
17. **ಆಯುಕ್ತರು**, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001
18. **ನಿರ್ದೇಶಕರು**, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಅರಮನೆ ರಸ್ತೆ ಬೆಂಗಳೂರು–560001
19. **ನಿರ್ದೇಶಕರು**, ಪದವಿಪೂರ್ವ ಶಿಕ್ಷಣ ಇಲಾಖೆ, 18 ನೇ ಅಡ್ಡರಸ್ತೆ, ಮಲ್ಲೇಶ್ವರಂ, ಬೆಂಗಳೂರು–560012
20. **ನಿರ್ದೇಶಕರು**, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009
21. **ಆಯುಕ್ತರು**, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001

ಪ್ರತಿಗಳು:

1. **ಘನತೆವೆತ್ತ ರಾಜ್ಯಪಾಲರ ಪ್ರಧಾನ ಕಾರ್ಯದರ್ಶಿಗಳು**, ರಾಜಭವನ, ಬೆಂಗಳೂರು – 560001
2. **ಮಾನ್ಯ ಕುಲಪತಿಯವರ ಆಪ್ತಶಾಖೆ**, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ, ಚಾಮರಾಜಪೇಟೆ, ಬೆಂಗಳೂರು.
3. ಕಛೇರಿ ಪ್ರತಿ 4. ರಕ್ಷತಾ ಪ್ರತಿ 5. ಜಾಲತಾಣಕ್ಕೆ ಅಳವಡಿಸಲು – ತುರ್ತು

ದೂರವಾಣಿ: 080 – 26701303 / 26705387; ಇ–ಮೇಲ್: karnatakasanskrituniversity@gmail.com
दूरवाणी: ०८०–२६७०१३०३; २६७०५३८७; ई-सङ्केत: – karnatakasanskrituniversity@gmail.com

**ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯ**
ಶ್ರೀ ಚಾಮರಾಜೇಂದ್ರ ಸಂಸ್ಕೃತ ಮಹಾವಿದ್ಯಾಲಯ ಆವರಣ
ಪಂಪಮಹಾಕವಿ ರಸ್ತೆ, ಚಾಮರಾಜಪೇಟೆ, ಬೆಂಗಳೂರು – 560018.

**कर्नाटक-संस्कृत-विश्वविद्यालय:**
श्री चामराजेन्द्र संस्कृत महाविद्यालयस्य परिसर:
पम्पमहाकविमार्ग:, चामराजपेटे, बेङ्गलूरु – ५६००१८.

## 19.08.2017ರಂದು ನಡೆದ ಪ್ರಶಾಸನ ಸಮಿತಿ (ಸಿಂಡಿಕೇಟ್) 39ನೇ ಸಭೆಯ ನಡಾವಳಿ

ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ **ಪ್ರಶಾಸನ ಸಮಿತಿ 39ನೇ ಸಭೆಯು** ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ **ಆಗಸ್ಟ್ 19, 2017ರ ಶನಿವಾರ ಮಧ್ಯಾಹ್ನ 2.30** ಗಂಟೆಗೆ ವಿಶ್ವವಿದ್ಯಾಲಯದ ಸಭಾಂಗಣದಲ್ಲಿ ನಡೆಯಿತು. ಈ ಸಭೆಯಲ್ಲಿ ಕೆಳಕಂಡ ಮಾನ್ಯ ಸದಸ್ಯರು ಹಾಜರಿದ್ದರು.

**ಹಾಜರಿದ್ದವರು:**

| | | |
|---|---|---|
| ೧. | **ಪ್ರೊ. ಪದ್ಮಾಶೇಖರ್**, ಮಾನ್ಯ ಕುಲಪತಿಗಳು | ಅಧ್ಯಕ್ಷರು |
| ೨. | **ಶ್ರೀ ಬಿ.ಎಲ್. ರಮೇಶ್**, ಉಪ ಕಾರ್ಯದರ್ಶಿಗಳು, ಹಣಕಾಸು ಇಲಾಖೆ, ಬೆಂಗಳೂರು | ಸದಸ್ಯರು |
| ೩. | **ಶ್ರೀಮತಿ ಸುಜಾತ ಗೌಡ**, ಬೆಂಗಳೂರು | ಸದಸ್ಯರು |
| ೪. | **ಶ್ರೀ ಶಿವಕುಮಾರ್ ಎನ್.**, ಬೆಂಗಳೂರು | ಸದಸ್ಯರು |
| ೫. | ವಿದ್ವಾನ್ ಸಿದ್ಧಮಲ್ಲ ಸ್ವಾಮಿ, ನಿವೃತ್ತ ಪ್ರಾಧ್ಯಾಪಕರು, ಮೈಸೂರು | ಸದಸ್ಯರು |
| ೬. | **ಕ್ಯಾಪ್ಟನ್ ಗಣೇಶ್ ಕಾರ್ಣಿಕ್**, ಮಾನ್ಯ ವಿಧಾನಪರಿಷತ್ ಸದಸ್ಯರು, ಬೆಂಗಳೂರು | ಸದಸ್ಯರು |
| ೭. | **ನಿರ್ದೇಶಕರು**, ಪ್ರಾಚ್ಯವಸ್ತು ಮತ್ತು ಸಂಗ್ರಹಾಲಯ ನಿರ್ದೇಶನಾಲಯ, ಮೈಸೂರು – ಪರವಾಗಿ ಶ್ರೀಮತಿ ಮಂಜುಳಾ ಸಿ.ಎನ್., ಸಹಾಯಕ ನಿರ್ದೇಶಕರು | ಸದಸ್ಯರು |
| ೮. | **ಶ್ರೀಮತಿ ಎಂ. ಶಿಲ್ಪ**, ಕುಲಸಚಿವರು | ಸದಸ್ಯ ಕಾರ್ಯದರ್ಶಿ |

**ಗೈರುಹಾಜರಿ:**

| | | |
|---|---|---|
| ೧. | **ಶ್ರೀ ಕೆ. ಭೀಮಪ್ಪ**, ನಿವೃತ್ತ ಶಿಕ್ಷಣಾಧಿಕಾರಿಗಳು, ಚಿತ್ರದುರ್ಗ | ಸದಸ್ಯರು |
| ೨. | **ಶ್ರೀ ಪರಪ್ಪ ಬಸಪ್ಪ ಬಾವಲತ್ತಿ**, ನಿವೃತ್ತ ಅಧ್ಯಾಪಕರು, ರಾಮಪುರ, ರಬಕವಿ | ಸದಸ್ಯರು |
| ೩. | **ಡಾ. ಮೈಕೆಲ್**, ಪ್ರಾಧ್ಯಾಪಕರು ಮತ್ತು ಡೀನ್, ಗುಲ್ಬರ್ಗಾ ವಿಶ್ವವಿದ್ಯಾಲಯ, ಕಲಬುರಗಿ | ಸದಸ್ಯರು |
| ೪. | **ಶ್ರೀಮತಿ ಜಯಶ್ರೀ ವಿ. ಕೊರತಿ**, ಪ್ರಾಚಾರ್ಯರು, ದಾಂಡೇಲಿ | ಸದಸ್ಯರು |
| ೫. | **ವಿದ್ವಾನ್ ಗಜಾನನ ಲಕ್ಷ್ಮೀನಾರಾಯಣ ಭಟ್ಟ**, ನಿವೃತ್ತ ಪ್ರಾಚಾರ್ಯರು, ಉಮ್ಮಚಗಿ | ಸದಸ್ಯರು |
| ೬. | **ಡಾ. ಕೆ. ಸುಧಾಕರ್**, ಶಾಸಕರು(ಚಿಕ್ಕಬಳ್ಳಾಪುರ), ಬೆಂಗಳೂರು | ಸದಸ್ಯರು |
| ೭. | **ಪ್ರಧಾನ ಕಾರ್ಯದರ್ಶಿಗಳು**, ಉನ್ನತ ಶಿಕ್ಷಣ ಇಲಾಖೆ, ಬೆಂಗಳೂರು | ಸದಸ್ಯರು |
| ೮. | **ಕಾರ್ಯದರ್ಶಿಗಳು**, ಕಂದಾಯ ಇಲಾಖೆ (ಧಾರ್ಮಿಕ ದತ್ತಿ ವಿಭಾಗ), ಬೆಂಗಳೂರು | ಸದಸ್ಯರು |
| ೯. | **ಪ್ರಾದೇಶಿಕ ನಿರ್ದೇಶಕರು**, ಯುಜಿಸಿ–ನೈಋತ್ಯ ಪ್ರಾದೇಶಿಕ ಕೇಂದ್ರ, ಬೆಂಗಳೂರು–09 | ಸದಸ್ಯರು |
| ೧೦. | **ಆಯುಕ್ತರು**, ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು | ಸದಸ್ಯರು |
| ೧೧. | **ಆಯುಕ್ತರು**, ಕಾಲೇಜು ಶಿಕ್ಷಣ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು–560001 | ಸದಸ್ಯರು |
| ೧೨. | **ನಿರ್ದೇಶಕರು**, ತಾಂತ್ರಿಕ ಶಿಕ್ಷಣ ಇಲಾಖೆ, ತಾಂತ್ರಿಕ ಶಿಕ್ಷಣ ಭವನ, ಬೆಂಗಳೂರು–560001 | ಸದಸ್ಯರು |
| ೧೩. | **ನಿರ್ದೇಶಕರು**, ಪದವಿಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಬೆಂಗಳೂರು–560012 | ಸದಸ್ಯರು |
| ೧೪. | **ನಿರ್ದೇಶಕರು**, ವೈದ್ಯಕೀಯ ಶಿಕ್ಷಣ ಇಲಾಖೆ, ಆನಂದರಾವ್ ವೃತ್ತ, ಬೆಂಗಳೂರು–560009 | ಸದಸ್ಯರು |
| ೧೫. | **ನಿರ್ದೇಶಕರು**, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು–560001 | ಸದಸ್ಯರು |

ಸಭೆಯ ಆರಂಭಕ್ಕೆ ಮುನ್ನ ಮಾನ್ಯ ಕುಲಪತಿಗಳು ಎಲ್ಲ ಗೌರವಾನ್ವಿತ ಸದಸ್ಯರನ್ನು ಸ್ವಾಗತಿಸಿದರು. ಅನಂತರ ಸಭೆಯಲ್ಲಿ ಕೆಳಕಂಡ ಕಾರ್ಯಸೂಚಿಗಳು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ಮಂಡಿತವಾಗಿ ನಿರ್ಣಯಗೊಂಡವು.

| ವಿ.ಸಂ. | ವಿಷಯ, ಟಿಪ್ಪಣಿ ಮತ್ತು ನಿರ್ಣಯ | |
|---|---|---|
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ಪ್ರಶಾಸನ ಸಮಿತಿ 38ನೇ ಸಭೆಯ ಅನುಪಾಲನಾ ವರದಿಯನ್ನು ಅನುಮೋದಿಸುವ ಬಗೆಗೆ.**<br>ಪ್ರಶಾಸನ ಸಮಿತಿ 38ನೇ ಸಭೆಯು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 01.06.2017 ರಂದು ನಡೆಯಿತು. ಸಭೆಯ ನಿರ್ಣಯದಂತೆ ಕೈಗೊಳ್ಳಲಾದ ಅನುಪಾಲನಾ ವರದಿಯನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಪ್ರಶಾಸನ ಸಮಿತಿ 38ನೇ ಸಭೆಯ ಅನುಪಾಲನಾ ವರದಿಯನ್ನು ಪರಿಶೀಲಿಸಿ, ಒಪ್ಪಿಗೆಯನ್ನು ನೀಡಿತು.** |

| | | |
|---|---|---|
| ವಿಷಯ 02 | ವಿಷಯ ಮತ್ತು ಟಿಪ್ಪಣಿ | **‘ಹಣಕಾಸು ಸಮಿತಿ’ 26ನೇ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ‘ಹಣಕಾಸು ಸಮಿತಿ’ 26ನೇ ಸಭೆಯನ್ನು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 10.08.2017ರಂದು ಕರೆಯಲಾಗಿದೆ. ಆ ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಲಾಗುವುದು. |
| | ನಿರ್ಣಯ | **ಸಭೆಯು ‘ಹಣಕಾಸು ಸಮಿತಿ’ 26ನೇ ಸಭೆಯ ನಡಾವಳಿಗಳನ್ನು ಪರಿಶೀಲಿಸಿ, ಅನುಮೋದನೆಯನ್ನು ನೀಡಿತು.** |
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **‘ಪ್ರಶಿಕ್ಷಣ ಪರಿಷತ್ತಿ’ನ 21ನೇ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ‘ಪ್ರಶಿಕ್ಷಣ ಪರಿಷತ್ತಿ’ನ 21ನೇ ಸಭೆಯನ್ನು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 16.08.2017ರಂದು ಕರೆಯಲಾಗಿದೆ. ಆ ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಲಾಗುವುದು. |
| | ನಿರ್ಣಯ | **ಸಭೆಯು ‘ಪ್ರಶಿಕ್ಷಣ ಪರಿಷತ್’ನ 21ನೇ ಸಭೆಯ ನಡಾವಳಿಗಳನ್ನು ಪರಿಶೀಲಿಸಿ, ಈ ಕೆಳಗಿನಂತೆ ಸೂಚನೆಗಳನ್ನು ನೀಡಿ ಅನುಮೋದನೆಯನ್ನು ನೀಡಿತು.**<br>• **ವಿಷಯ ಸಂಖ್ಯೆ 1 ಮತ್ತು 2ಕ್ಕೆ ಸಂಬಂಧಿಸಿದಂತೆ, ವಿಶ್ವವಿದ್ಯಾಲಯದ ಬಿ.ಎ. ಮತ್ತು ಎಂ.ಎ. ಹಾಗೂ ವೇದಾಂತ ಪರಿಷ್ಕೃತ ಪಾಠ್ಯಕ್ರಮಗಳನ್ನು ಇತರೆ ವಿಶ್ವವಿದ್ಯಾಲಯಗಳ ಪಾಠ್ಯಕ್ರಮದೊಂದಿಗೆ ಹೋಲಿಸಿ, ಈ ಪಾಠ್ಯಕ್ರಮವು ಯುಜಿಸಿ ನಿಯಮಾವಳಿಗಳನ್ವಯ ಇವೆಯೇ ಎಂಬುದನ್ನು ಪರಿಶೀಲಿಸಿ, ಪಾಠ್ಯಕ್ರಮವನ್ನು ತುಲನಾತ್ಮಕವಾಗಿ ಮುಂದಿನ ಸಭೆಯಲ್ಲಿ ಮಂಡಿಸಲು ಸಭೆಯು ಸೂಚಿಸಿತು.**<br>• **ಅಧ್ಯಕ್ಷರ ಅಪ್ಪಣೆ ಮೇರೆಗೆ ಮಂಡಿತವಾದ ವಿಷಯ ಸಂಖ್ಯೆ 3ಕ್ಕೆ ಸಂಬಂಧಿಸಿದಂತೆ, ‘ವೇದಮೂಲ’ ತರಗತಿಯನ್ನು ಪಿ.ಯು.ಸಿ.ಗೆ ಸಮೀಕರಿಸಿ ‘ವೇದ ಬಿ.ಎ.–ಶಾಸ್ತ್ರಿ’ ಪದವಿಗೆ ಪ್ರವೇಶ ನೀಡುವುದಕ್ಕೆ ಸಭೆಯು ಒಪ್ಪಿಗೆಯನ್ನು ನೀಡಿತು. ಆದರೆ, ‘ವೇದ (ಘನಾಂತ) ಎಂ.ಎ.–ಆಚಾರ್ಯ’ ಪದವಿ ಪ್ರವೇಶಕ್ಕೆ ಸಂಬಂಧಿಸಿದಂತೆ, ಒಂದೇ ವಿಷಯವನ್ನು ಕುರಿತು ದೀರ್ಘಕಾಲ ಅಭ್ಯಾಸ ಮಾಡಿದ ಘನಪಾಠಿಗಳ ಜ್ಞಾನವನ್ನು ಬಿ.ಎ. ಪದವಿಗೆ ಸಮೀಕರಿಸುವ ಬಗೆಗೆ ಹೊಸ ನಿಯಮಾವಳಿಗಳನ್ನು ರೂಪಿಸುವ ಅಗತ್ಯವಿದೆ ಎಂದು ಸಭೆಯು ಭಾವಿಸಿತು. ಇದಕ್ಕೆ ಸಂಬಂಧಿಸಿದಂತೆ ಪ್ರೊ. ವಿ.ಆರ್. ಪಂಚಮುಖಿ, ಡಾ. ಬನ್ನಂಜೆ ಗೋವಿಂದಾಚಾರ್ಯ, ಮುಂತಾದ ಹಿರಿಯ ವಿದ್ವಾಂಸರೊಡನೆ ಮತ್ತೊಮ್ಮೆ ಚರ್ಚಿಸಿ, ಕ್ರಮವಹಿಸಬಹುದೆಂದು ಸಭೆಯು ಅಭಿಪ್ರಾಯಪಟ್ಟಿತು.** |
| ವಿಷಯ 04 | ವಿಷಯ ಮತ್ತು ಟಿಪ್ಪಣಿ | **‘ಕಟ್ಟಡ ಸಲಹಾ ಸಮಿತಿ’ ಸಭೆಯ ನಡಾವಳಿಗಳನ್ನು ಅನುಮೋದಿಸುವ ಬಗೆಗೆ.**<br>ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ‘ಕಟ್ಟಡ ಸಲಹಾ ಸಮಿತಿ’ ಸಭೆಯನ್ನು ಮಾನ್ಯ ಕುಲಪತಿಗಳ ಅಧ್ಯಕ್ಷತೆಯಲ್ಲಿ ದಿನಾಂಕ: 11.08.2017ರಂದು ಕರೆಯಲಾಗಿದೆ. ಆ ಸಭೆಯ ನಡಾವಳಿಗಳನ್ನು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಲಾಗುವುದು. |
| | ನಿರ್ಣಯ | **ಸಭೆಯು ‘ಕಟ್ಟಡ ಸಲಹಾ ಸಮಿತಿ’ ಸಭೆಯ ನಡಾವಳಿಗಳನ್ನು ಪರಿಶೀಲಿಸಿ, ಅನುಮೋದನೆಯನ್ನು ನೀಡಿತು.** |
| ವಿಷಯ 05 | ವಿಷಯ ಮತ್ತು ಟಿಪ್ಪಣಿ | **ನೇರ ನೇಮಕಾತಿ ಮತ್ತು CAS (Career Advancement Scheme) ಪರಿನಿಯಮವನ್ನು ಅನುಮೋದನೆಗಾಗಿ ಸರ್ಕಾರಕ್ಕೆ ಸಲ್ಲಿಸಲು ಅನುಮತಿ ನೀಡುವ ಬಗೆಗೆ.**<br>ಉನ್ನತ ಶಿಕ್ಷಣದಲ್ಲಿ ಗುಣಮಟ್ಟವನ್ನು ಕಾಯ್ದುಕೊಳ್ಳುವ ನಿಟ್ಟಿನಲ್ಲಿ ವಿಶ್ವವಿದ್ಯಾಲಯಗಳು ಹಾಗೂ ಕಾಲೇಜುಗಳ ಅಧ್ಯಾಪಕರು ಮತ್ತು ಇನ್ನಿತರ ಶೈಕ್ಷಣಿಕ ಸಿಬ್ಬಂದಿಗಳ ನೇಮಕಾತಿಗೆ ನಿಗದಿಪಡಿಸಲಾಗಿದ್ದ ಕನಿಷ್ಟ ವಿದ್ಯಾರ್ಹತೆಗಳಿಗೆ ಸಂಬಂಧಿಸಿದಂತೆ ವಿಶ್ವವಿದ್ಯಾಲಯ ಅನುದಾನ ಆಯೋಗ(ಯುಜಿಸಿ)ವು ತಿದ್ದುಪಡಿಗಳನ್ನು ಮಾಡಿ ಅಧಿಸೂಚನೆ ಸಂಖ್ಯೆ: F1-2/2016 (PS)/Amendment, dated: 11.07.2016ರ ಅನ್ವಯ ಅಧಿಸೂಚನೆಯನ್ನು ಹೊರಡಿಸಿದೆ. ಈ ಅಧಿಸೂಚನೆಯಂತೆ, ಯುಜಿಸಿ ಮಾಡಿರುವ ತಿದ್ದುಪಡಿಗಳನ್ನು ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳೂ ಅಳವಡಿಸಿಕೊಳ್ಳುವುದಕ್ಕೆ ಸಂಬಂಧಿಸಿದಂತೆ ದಿನಾಂಕ: 05.05.2017ರಂದು ನಡೆದ ಕರ್ನಾಟಕ ರಾಜ್ಯ ಉನ್ನತ ಶಿಕ್ಷಣ ಪರಿಷತ್ತಿನ 18ನೇ ಸಾಮಾನ್ಯ ಸಭೆಯು ಚರ್ಚಿಸಿ, “ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ಯುಜಿಸಿ 2010 ಮತ್ತು 2016ರ ತಿದ್ದುಪಡಿ ರೆಗ್ಯುಲೇಷನ್ಸ್‌ಗಳನ್ನು ಕರ್ನಾಟಕ ರಾಜ್ಯ ವಿಶ್ವವಿದ್ಯಾಲಯಗಳ ಅಧಿನಿಯಮ 2000 ರನ್ವಯ ಕರಡು ಅನುಶಾಸನಗಳನ್ನು ರಚಿಸುವುದರ ಮೂಲಕ ಸರ್ಕಾರಕ್ಕೆ ಸಲ್ಲಿಸಿ ಕುಲಾಧಿಪತಿಗಳ ಅನುಮೋದನೆ ಪಡೆಯಬೇಕೆಂದು” ನಿರ್ಣಯಿಸಿರುತ್ತದೆ. ಈ ಹಿನ್ನೆಲೆಯಲ್ಲಿ, ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದ ಅಧ್ಯಾಪಕರು ಹಾಗೂ ಇನ್ನಿತರ ಶೈಕ್ಷಣಿಕ ಸಿಬ್ಬಂದಿಗಳ ನೇಮಕಾತಿ ಪರಿನಿಯಮಕ್ಕೆ ತಿದ್ದುಪಡಿಗಳನ್ನು ಮಾಡಲು ಹಾಗೂ ವಿಶ್ವವಿದ್ಯಾಲಯದ ಇನ್ನಿತರ ವಿಷಯಗಳಿಗೆ ಸಂಬಂಧಪಟ್ಟ |

| | | |
|---|---|---|
| | | ಪರಿನಿಯಮಗಳನ್ನು ಸಿದ್ಧಪಡಿಸಲು ಕುಲಪತಿಗಳು 'ಪರಿನಿಯಮ ರಚನಾ ಸಮಿತಿ'ಯನ್ನು ನೇಮಿಸಿರುತ್ತಾರೆ. ಸದರಿ ಸಮಿತಿಯು ದಿನಾಂಕ: 01.08.2017ರಂದು ಸಭೆ ಸೇರಿ, ಚರ್ಚಿಸಿ, ಪರಿನಿಯಮವನ್ನು ರಚಿಸಿರುತ್ತಾರೆ. ಸದರಿ ಪರಿನಿಯಮವನ್ನು ಸರ್ಕಾರಕ್ಕೆ ಸಲ್ಲಿಸಿ, ಕುಲಾಧಿಪತಿಗಳ ಅನುಮೋದನೆಯನ್ನು ಪಡೆಯಲು ಸಭೆಯ ಅನುಮತಿಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ನೇರ ನೇಮಕಾತಿ ಮತ್ತು CAS (Career Advancement Scheme) ಪರಿನಿಯಮವನ್ನು ಪರಿಶೀಲಿಸಿ ಒಪ್ಪಿಗೆ ನೀಡಿತು ಹಾಗೂ ಈ ಪರಿನಿಯಮವನ್ನು ನಿಯಮಾನುಸಾರ ಸರ್ಕಾರಕ್ಕೆ ಸಲ್ಲಿಸಿ ಅನುಮೋದನೆಯನ್ನು ಪಡೆಯಲು ಸೂಚಿಸಿತು.** |
| ವಿಷಯ 06 | ವಿಷಯ ಮತ್ತು ಟಿಪ್ಪಣಿ | **ಪದವಿ ಪ್ರಮಾಣಪತ್ರಗಳನ್ನು ನೀಡುವ ವಿಷಯದಲ್ಲಿ ತತ್ಕಾಲ್ ಸೇವೆಯನ್ನು ಅಳವಡಿಸಿಕೊಳ್ಳುವ ಬಗೆಗೆ.**<br>ಪದವಿ ಪ್ರಮಾಣಪತ್ರಗಳನ್ನು ನೀಡುವ ವಿಷಯಲ್ಲಿ ರಾಜ್ಯದ ಎಲ್ಲಾ ವಿಶ್ವವಿದ್ಯಾಲಯಗಳು ತತ್ಕಾಲ್ ಸೇವೆಯನ್ನು ಅಳವಡಿಸಿಕೊಳ್ಳಬೇಕೆಂದು ಕರ್ನಾಟಕ ಸರ್ಕಾರದ ಮಾನ್ಯ ಉನ್ನತ ಶಿಕ್ಷಣ ಸಚಿವರು ಪತ್ರವನ್ನು ಬರೆದಿರುತ್ತಾರೆ. ಈ ಹಿನ್ನೆಲೆಯಲ್ಲಿ, ನಮ್ಮ ವಿಶ್ವವಿದ್ಯಾಲಯದಲ್ಲಿ ತತ್ಕಾಲ್ ಸೇವೆಯನ್ನು ಅಳವಡಿಸಿಕೊಳ್ಳಬೇಕೆ ಅಥವಾ ಬೇಡವೇ ಎಂದು, ಅಳವಡಿಕೊಳ್ಳಬೇಕೆಂದ ಪಕ್ಷದಲ್ಲಿ ಅದರ ಶುಲ್ಕ ಎಷ್ಟಿರಬೇಕೆಂದು (ಇತರೆ ವಿಶ್ವವಿದ್ಯಾಲಯಗಳಲ್ಲಿ ರೂ. 5000/–ಗಳನ್ನು ನಿಗದಿಪಡಿಸಲಾಗಿದೆ.) ಹಾಗೂ ತತ್ಕಾಲ್ ಸೇವೆಯನ್ನು ಪದವಿ ಪ್ರಮಾಣಪತ್ರವನ್ನು ಪಡೆಯುವವರಿಗೆ ಘಟಿಕೋತ್ಸವಕ್ಕೂ ಮುಂಚಿತವಾಗಿ ನೀಡಬಹುದೇ ಇಲ್ಲವೇ? ಎಂಬ ವಿಚಾರದ ಸಲುವಾಗಿ ಸೂಕ್ತ ನಿರ್ಣಯಕ್ಕಾಗಿ ಪ್ರಶಾಸನ ಸಮಿತಿ ಸಭೆಗೆ ಮಂಡಿಸಿದೆ. |
| | ನಿರ್ಣಯ | **ರಾಜ್ಯದ ಇತರೆ ವಿಶ್ವವಿದ್ಯಾಲಯಗಳಲ್ಲಿರುವಂತೆ, ಪದವಿ ಪ್ರಮಾಣಪತ್ರಗಳನ್ನು ನೀಡಲು ನಿಯಮಾನುಸಾರ ಸಂಸ್ಕೃತ ವಿಶ್ವವಿದ್ಯಾಲಯವೂ 'ತತ್ಕಾಲ್ ಸೇವೆ'ಯನ್ನು ಅಳವಡಿಸಿಕೊಳ್ಳುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು. ತತ್ಕಾಲ್ ಸೇವೆಯಲ್ಲಿ ಪಡೆಯುವ ಪದವಿ ಪ್ರಮಾಣಪತ್ರಕ್ಕೆ ರೂ. 3000/–ಗಳ ಶುಲ್ಕವನ್ನು ನಿಗದಿಪಡಿಸಲು ಸಭೆಯು ಸೂಚಿಸಿತು. ಅಲ್ಲದೇ, ಪದವಿ ಪ್ರಮಾಣಪತ್ರವು ವಿಶ್ವವಿದ್ಯಾಲಯದ ಘನತೆ ಹಾಗೂ ಸಂಸ್ಕೃತ ಭಾಷೆಯ ವಿಶೇಷತೆಯನ್ನು ಒಳಗೊಂಡಿರುವಂತೆ ವಿನ್ಯಾಸಗೊಳಿಸಲು ಸಭೆಯು ಅಭಿಪ್ರಾಯಪಟ್ಟಿತು.** |
| ವಿಷಯ 07 | ವಿಷಯ ಮತ್ತು ಟಿಪ್ಪಣಿ | **ಯುಜಿಸಿ ನಿಯಮಾನುಸಾರ ವಿದ್ವನ್ಮಧ್ಯಮಾ ಹಾಗೂ ವಿದ್ವದುತ್ತಮಾ ಪದವಿಗಳನ್ನು ಶಾಸ್ತ್ರಿ ಹಾಗೂ ಆಚಾರ್ಯ ಎಂದು ನಾಮಾಂತರಿಸಿ ಪದವಿ ಪ್ರಮಾಣಪತ್ರಗಳನ್ನು ನೀಡುವ ಬಗೆಗೆ.**<br>ಯುಜಿಸಿ ನಿಯಮಾನುಸಾರ ವಿದ್ವನ್ಮಧ್ಯಮಾ ಹಾಗೂ ವಿದ್ವದುತ್ತಮಾ ಪದವಿಗಳನ್ನು ಶಾಸ್ತ್ರೀ ಹಾಗೂ ಆಚಾರ್ಯ ಎಂದು ನಾಮಾಂತರಿಸಿ ಪದವಿ ಪ್ರಮಾಣಪತ್ರಗಳನ್ನು ನೀಡಬೇಕೆಂದು 2016 ರಲ್ಲಿ ನಡೆದಿರುವ ಪ್ರಶಾಸನ ಸಮಿತಿ ಸಭೆಯಲ್ಲಿ ಈಗಾಗಲೇ ನಿರ್ಣಯ ಕೈಗೊಳ್ಳಲಾಗಿದೆ. ಆದರೇ ಆ ನಿರ್ಣಯವು 2016ರಲ್ಲಿ ಕೈಗೊಂಡ ಕಾರಣ 2016–17ನೇ ಶೈಕ್ಷಣಿಕ ಸತ್ರದಲ್ಲಿ ನೋಂದಾಯಿಸಿಕೊಂಡ ವಿದ್ಯಾರ್ಥಿಗಳಿಗೆ ಅನ್ವಯವಾಗುತ್ತದೆಯೇ ಅಥವಾ ಈ ಹಿಂದೆಯೇ ನೋಂದಾಯಿಸಿಕೊಂಡು ಇನ್ನುಮುಂದೆ ಪದವಿ ಪ್ರಮಾಣಪತ್ರಗಳನ್ನು ಸ್ವೀಕರಿಸುವ ವಿದ್ಯಾರ್ಥಿಗಳಿಗೆ ಅನ್ವಯವಾಗುತ್ತದೆಯೋ? ಎಂಬ ಸ್ಪಷ್ಟ ನಿರ್ದೇಶನ ಇರುವುದಿಲ್ಲ. ಆದ ಕಾರಣ ಈ ವಿಷಯವನ್ನು ಸ್ಪಷ್ಟ ನಿರ್ದೇಶನಕ್ಕಾಗಿ ಪ್ರಶಾಸನ ಸಮಿತಿ ಸಭೆಗೆ ಮಂಡಿಸಿದೆ. |
| | ನಿರ್ಣಯ | **ಬಿ.ಎ. ಮತ್ತು ಎಂ.ಎ. ಪದವಿಗಳಿಗೆ 2016–17ನೇ ಸಾಲಿನಿಂದ ನೋಂದಾಯಿಸಿಕೊಂಡ ವಿದ್ಯಾರ್ಥಿಗಳಿಗೆ ಅನ್ವಯವಾಗುವಂತೆ 'ಶಾಸ್ತ್ರಿ' ಹಾಗೂ 'ಆಚಾರ್ಯ' ಹೆಸರಿನಲ್ಲಿ ಪದವಿ ಪ್ರಮಾಣಪತ್ರಗಳನ್ನು ನೀಡಲು ಸಭೆಯು ಒಪ್ಪಿಗೆಯನ್ನು ನೀಡಿತು.** |
| ವಿಷಯ 08 | ವಿಷಯ ಮತ್ತು ಟಿಪ್ಪಣಿ | **ರಾಜ್ಯ ವೇತನಶ್ರೇಣಿಯ ಹುದ್ದೆಗಳ ನೇಮಕಾತಿ ಬಗೆಗೆ.**<br>ದಿನಾಂಕ: 16.03.2016ರಂದು ನಡೆದ ಪ್ರಶಾಸನ ಸಮಿತಿ 32ನೇ ಸಭೆಯ ಅನುಮೋದನೆಯಂತೆ ರಾಜ್ಯ ವೇತನಶ್ರೇಣಿಯ ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ (ಸಂಖ್ಯೆ: ಕಸಂವಿ/ಕ.ರಾ.ವೇ/ಬೋಧಕ–ಬೋಧಕೇತರ ಹುದ್ದೆ ನೇ 17/2016–17; ದಿನಾಂಕ: 03.02.2017)ಯನ್ನು ಹೊರಡಿಸಲಾಗಿತ್ತು. ಸರ್ಕಾರವು ಸುತ್ತೋಲೆ ಸಂಖ್ಯೆ: ಇಡಿ 136 ಯುಎನ್ಇ 2017; ದಿನಾಂಕ: 17.07.2017ರಲ್ಲಿ ಹುದ್ದೆಗಳನ್ನು ತುಂಬುವಾಗ 'ಕರ್ನಾಟಕ ನಾಗರಿಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮಗಳು 1977'ರ ನಿಯಮಗಳನ್ನು ಅನುಸರಿಸಿ ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಬಹುದೆಂದು ಸೂಚಿಸಿದೆ. ವಿಶ್ವವಿದ್ಯಾಲಯದ ರಾಜ್ಯ ವೇತನಶ್ರೇಣಿಯ ನೇಮಕಾತಿಗಳ ಸಂದರ್ಭದಲ್ಲಿ ಇದೇ ನಿಯಮಗಳನ್ನು ಅನುಸರಿಸಲಾಗುತ್ತಿರುತ್ತದೆ ಹಾಗೂ ಸರ್ಕಾರದ ಸುತ್ತೋಲೆಯಲ್ಲಿ ಸೂಚಿಸಿದ |

| | | |
|---|---|---|
| | | ಮಾರ್ಗಸೂಚಿಗಳನ್ನು ಅನುಸರಿಸಿ ಆಯ್ಕೆ ಪ್ರಕ್ರಿಯೆಯನ್ನು ನಡೆಸಲಾಗುತ್ತಿದ್ದು, ಸಭೆಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ರಾಜ್ಯ ಸರ್ಕಾರದ ಸುತ್ತೋಲೆಗೆ ಅನುಸಾರವಾಗಿ ರಾಜ್ಯ ವೇತನಶ್ರೇಣಿಯ ಹುದ್ದೆಗಳ ನೇಮಕಾತಿ ಪ್ರಕ್ರಿಯೆಯನ್ನು ಮುಂದುವರೆಸಲು ಸಭೆಯು ಅನುಮೋದನೆಯನ್ನು ನೀಡಿತು.** |
| ವಿಷಯ 09 | ವಿಷಯ ಮತ್ತು ಟಿಪ್ಪಣಿ | **ಯುಜಿಸಿ ವೇತನಶ್ರೇಣಿಯ ಹುದ್ದೆಗಳ ನೇಮಕಾತಿ ಬಗೆಗೆ.**<br>ದಿನಾಂಕ: 16.03.2016ರಂದು ನಡೆದ ಪ್ರಶಾಸನ ಸಮಿತಿ 32ನೇ ಸಭೆಯ ಅನುಮೋದನೆಯಂತೆ ಯುಜಿಸಿ ವೇತನಶ್ರೇಣಿಯ ಬೋಧಕ–ಬೋಧಕೇತರ ಹುದ್ದೆಗಳ ನೇಮಕಾತಿಗಾಗಿ ಅಧಿಸೂಚನೆ (ಸಂಖ್ಯೆ: UGC-PS/Teaching & Non-Teaching Apmt./2016-17; ದಿನಾಂಕ: 03.02.2017)ಯನ್ನು ಹೊರಡಿಸಲಾಗಿತ್ತು. ಸರ್ಕಾರವು ಸುತ್ತೋಲೆ ಸಂಖ್ಯೆ: ಇಡಿ 136 ಯುಎನ್ಇ 2017; ದಿನಾಂಕ: 17.07.2017ರಲ್ಲಿ ಹುದ್ದೆಗಳನ್ನು ತುಂಬುವಾಗ ಯುಜಿಸಿ 2010 ಮತ್ತು 2016ರ ತಿದ್ದುಪಡಿ ರೆಗ್ಯುಲೇಷನ್ಸ್‌ಗಳನ್ನು ಅಳವಡಿಸಿಕೊಂಡು ನೇಮಕಾತಿ ಪ್ರಕ್ರಿಯೆಗಳನ್ನು ಕೈಗೊಳ್ಳಬಹುದೆಂದು ಸೂಚಿಸಿದೆ. ನೇರ ನೇಮಕಾತಿ ಮತ್ತು CAS (Career Advancement Scheme) ಪರಿನಿಯಮವನ್ನು ರಚಿಸಿದ್ದು, ಇದೇ ಸಭೆಯ ವಿಷಯ ಸಂಖ್ಯೆ: 04ರಲ್ಲಿ ಮಂಡಿಸಿದೆ. ಈ ಪರಿನಿಯಮವು ಕುಲಾಧಿಪತಿಗಳಿಂದ ಅನುಮೋದನೆಗೊಂಡ ನಂತರ ನೇಮಕಾತಿ ಪ್ರಕ್ರಿಯೆ ಮುಂದುವರೆಸಲಾಗುವುದು. ಸಭೆಯ ಅವಗಾಹನೆಗಾಗಿ ಈ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಸಭೆಯು ಎಲ್ಲ ಅಂಶಗಳನ್ನು ಪರಿಶೀಲಿಸಿ, ನಿಯಮಾನುಸಾರ ಮುಂದುವರೆಯಲು ಅನುಮೋದನೆಯನ್ನು ನೀಡಿತು.** |
| ವಿಷಯ 10 | ವಿಷಯ ಮತ್ತು ಟಿಪ್ಪಣಿ | **ಶ್ರೀ ಸಚಿನ್ ಬಿ.ಎಸ್., ವಕೀಲರು –ಇವರನ್ನು ವಿಶ್ವವಿದ್ಯಾಲಯದ ವಕೀಲರ ಸಮಿತಿಗೆ ನೇಮಿಸುವ ಬಗೆಗೆ.**<br>ಕರ್ನಾಟಕ ರಾಜ್ಯಪಾಲರ ವಿಶೇಷ ಕಾರ್ಯದರ್ಶಿಗಳ ಅರೆಸರ್ಕಾರಿ ಪತ್ರ ಸಂಖ್ಯೆ: GS 02 MISC 2017; ದಿನಾಂಕ: 19.05.2017 ಮತ್ತು ಕರ್ನಾಟಕ ರಾಜ್ಯಪಾಲರ ಸಚಿವಾಲಯದ ಪತ್ರಸಂಖ್ಯೆ: GS 02 MISC 2017; ದಿನಾಂಕ: 21.06.2017ರಲ್ಲಿ ಶ್ರೀ ಸಚಿನ್ ಬಿ.ಎಸ್., ವಕೀಲರು –ಇವರ ಸ್ವವಿವರವನ್ನು ಲಗತ್ತಿಸಿ, ವಿಶ್ವವಿದ್ಯಾಲಯದ ವಕೀಲರ ಸಮಿತಿಗೆ ಶ್ರೀ ಸಚಿನ್ ಅವರನ್ನು ಸೇರಿಸುವಂತೆ ಕೋರಿರುತ್ತಾರೆ ಹಾಗೂ ಕೈಗೊಂಡ ಕ್ರಮದ ಬಗ್ಗೆ ಸಚಿವಾಲಯಕ್ಕೆ ಮಾಹಿತಿಯನ್ನು ಸಲ್ಲಿಸುವಂತೆ ಸೂಚಿಸಿರುತ್ತಾರೆ. ಈ ಹಿನ್ನೆಲೆಯಲ್ಲಿ ಮುಂದಿನ ಕ್ರಮವಹಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಈ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಶ್ರೀ ಸಚಿನ್ ಬಿ.ಎಸ್., ವಕೀಲರು –ಇವರನ್ನು ವಿಶ್ವವಿದ್ಯಾಲಯದ ವಕೀಲರ ಸಮಿತಿಗೆ ಸೇರಿಸಲು ಸಭೆಯು ಒಪ್ಪಿಗೆಯನ್ನು ನೀಡಿತು.** |
| ವಿಷಯ 11 | ವಿಷಯ ಮತ್ತು ಟಿಪ್ಪಣಿ | **ಶ್ರೀಮತಿ ಎಸ್.ಎನ್. ಅನಿತಾ –ಇವರನ್ನು ಶ್ರೀ ಶಿವಕುಮಾರಸ್ವಾಮೀಜಿ ವೇದ ಸಂಸ್ಕೃತ ಪಾಠಶಾಲೆ, ಸಿದ್ಧಗಂಗಾ ಮಠ, ತುಮಕೂರು ಜಿಲ್ಲೆ –ಇಲ್ಲಿಗೆ 'ಡಿ' ಗ್ರೂಪ್ ಹುದ್ದೆಗೆ ಅನುಕಂಪದ ಆಧಾರದ ಮೇಲೆ ನೇಮಕ ಮಾಡಿರುವ ಬಗೆಗೆ.**<br>ಶ್ರೀ ಸಿದ್ಧಗಂಗಾ ವಿದ್ಯಾಸಂಸ್ಥೆ (ರಿ)., ಶ್ರೀ ಸಿದ್ಧಗಂಗಾ ಮಠ, ತುಮಕೂರು ಜಿಲ್ಲೆ – ಇದರ ವತಿಯಿಂದ ನಡೆಯುತ್ತಿರುವ ಶ್ರೀ ಶಿವಕುಮಾರಸ್ವಾಮೀಜಿ ವೇದ ಸಂಸ್ಕೃತ ಪಾಠಶಾಲೆ, ಸಿದ್ಧಗಂಗಾ ಮಠ, ತುಮಕೂರು ಜಿಲ್ಲೆ –ಈ ಶಾಲೆಯಲ್ಲಿ ನಿವೃತ್ತಿಯಿಂದ ಖಾಲಿಯಿದ್ದ ಒಂದು 'ಡಿ' ಗ್ರೂಪ್ ಹುದ್ದೆಗೆ ಇದೇ ವಿದ್ಯಾಸಂಸ್ಥೆಯಲ್ಲಿ ಸಹಶಿಕ್ಷಕರಾಗಿ ಕಾರ್ಯನಿರ್ವಹಿಸುತ್ತಿದ್ದ ಶ್ರೀ ಟಿ.ಎಸ್. ಸಿದ್ಧಗಂಗಪ್ಪ ಇವರು ನಿಧನರಾದ ಕಾರಣ 'ಅನುಕಂಪದ ಆಧಾರದ ಮೇಲೆ' ಇವರ ಪತ್ನಿ ಶ್ರೀಮತಿ ಎಸ್.ಎನ್. ಅನಿತಾ ಅವರನ್ನು ಆಡಳಿತ ಮಂಡಳಿಯು ನೇಮಕಾತಿ ಮಾಡಿಕೊಂಡು, ಇವರ ನೇಮಕಾತಿಯನ್ನು ವೇತನಸಹಿತವಾಗಿ ಅನುಮೋದಿಸುವಂತೆ ವಿಶ್ವವಿದ್ಯಾಲಯಕ್ಕೆ ಪ್ರಸ್ತಾವನೆಯನ್ನು ಸಲ್ಲಿಸಿರುತ್ತಾರೆ. ಇವರು ಸಲ್ಲಿಸಿರುವ ಪ್ರಸ್ತಾವನೆಯನ್ನು ಪರಿಶೀಲಿಸಿ ನಿಯಮಾನುಸಾರ ಅನುಮೋದನೆಯನ್ನು ನೀಡಲಾಗಿದೆ. ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಈ ವಿಷಯವನ್ನು ಮಂಡಿಸಿದೆ. |
| | ನಿರ್ಣಯ | **ಸಭೆಯು ವಿವರಗಳನ್ನು ಪರಿಶೀಲಿಸಿತು ಹಾಗೂ ಶ್ರೀಮತಿ ಎಸ್.ಎನ್. ಅನಿತಾ –ಇವರನ್ನು ಅನುಕಂಪದ ಆಧಾರದ ಮೇಲೆ ಶ್ರೀ ಶಿವಕುಮಾರಸ್ವಾಮೀಜಿ ವೇದ ಸಂಸ್ಕೃತ ಪಾಠಶಾಲೆ, ಸಿದ್ಧಗಂಗಾ ಮಠ, ತುಮಕೂರು ಜಿಲ್ಲೆ –ಇಲ್ಲಿನ ಗ್ರೂಪ್ 'ಡಿ' ಹುದ್ದೆಗೆ ನೇಮಕ ಮಾಡಿರುವುದಕ್ಕೆ ಸಭೆಯು ಅನುಮೋದನೆಯನ್ನು ನೀಡಿತು.** |

| | | |
|---|---|---|
| ವಿಷಯ 12 | ವಿಷಯ ಮತ್ತು ಟಿಪ್ಪಣಿ | **ಪ್ರಸಾರಾಂಗದಿಂದ ಪ್ರಕಟಗೊಂಡ ಸಂಸ್ಕೃತ ಪಾಠಶಾಲಾ ಪಠ್ಯಪುಸ್ತಕಗಳನ್ನು ಮರುಮುದ್ರಣ ಮಾಡುವ ಬಗೆಗೆ.**<br>ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಪಠ್ಯಪುಸ್ತಕಗಳನ್ನು ವಿಶ್ವವಿದ್ಯಾಲಯದ ಪ್ರಸಾರಾಂಗದ ವತಿಯಿಂದ ಮುದ್ರಣ ಮಾಡಲಾಗಿತ್ತು. ಈ ಪಠ್ಯಪುಸ್ತಕಗಳು ಖಾಲಿಯಾಗಿದ್ದು, ಮರುಮುದ್ರಣ ಮಾಡಿಸಬೇಕಾಗಿದೆ. ಈ ಹಿನ್ನೆಲೆಯಲ್ಲಿ, ಸಮಿತಿಯೊಂದನ್ನು ರಚಿಸಲಾಗಿತ್ತು. ಈ ಸಮಿತಿಯು ದಿನಾಂಕ: 31.07.2017ರಂದು ಸಭೆ ಸೇರಿ, ಪಠ್ಯಪುಸ್ತಕಗಳನ್ನು ಮರುಮುದ್ರಣ ಮಾಡುವುದಕ್ಕೆ ಸಂಬಂಧಿಸಿದಂತೆ ನಿರ್ಣಯವನ್ನು ಕೈಗೊಂಡಿರುತ್ತದೆ. ಸಭೆಯ ನಡಾವಳಿಯನ್ನು ಅನುಮೋದನೆಗಾಗಿ ಪ್ರಶಾಸನ ಸಮಿತಿ ಸಭೆಗೆ ಮಂಡಿಸಿದೆ. |
| | ನಿರ್ಣಯ | **ಸಭೆಯು ಉಪಸಮಿತಿಯ ನಡಾವಳಿಯನ್ನು ಪರಿಶೀಲಿಸಿತು ಹಾಗೂ ಸಮಿತಿಯ ನಿರ್ಣಯದಂತೆ ಸಂಸ್ಕೃತ ಪಾಠಶಾಲಾ ಪಠ್ಯಪುಸ್ತಕಗಳನ್ನು ಮರುಮುದ್ರಣ ಮಾಡುವುದಕ್ಕೆ ಒಪ್ಪಿಗೆಯನ್ನು ಸೂಚಿಸಿತು.** |
| **ಅಧ್ಯಕ್ಷರ ಅಪ್ಪಣೆ ಮೇರೆಗೆ ಇತರೆ ವಿಷಯಗಳು** | | |
| ವಿಷಯ 01 | ವಿಷಯ ಮತ್ತು ಟಿಪ್ಪಣಿ | **ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ, ಸಹಪ್ರಾಧ್ಯಾಪಕರು, ವೇದಾಂತನಿಕಾಯ –ಇವರ ಹಿಂದಿನ ಸೇವಾವಧಿಯನ್ನು ಪರಿಗಣಿಸುವ ಬಗೆಗೆ.**<br>ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ –ಇವರು ದಿನಾಂಕ: 05.03.2014ರಿಂದ ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯದಲ್ಲಿ ವೇದಾಂತ ನಿಕಾಯದ ಸಹಪ್ರಾಧ್ಯಾಪಕರಾಗಿ ಕಾರ್ಯ ನಿರ್ವಹಿಸುತ್ತಿದ್ದು, ಇದಕ್ಕೆ ಪೂರ್ವದಲ್ಲಿ, ದಿನಾಂಕ: 27.12.2005ರಿಂದ 04.03.2014ರ ವರೆಗೆ ಒಟ್ಟು 07 ವರ್ಷಗಳ ಕಾಲ ರಾಜಸ್ಥಾನದ ಜಗದ್ಗುರು ರಾಮಾನಂದಾಚಾರ್ಯ ರಾಜಸ್ಥಾನ ಸಂಸ್ಕೃತ ವಿಶ್ವವಿದ್ಯಾಲಯ –ಇಲ್ಲಿ ಸಹಪ್ರಾಧ್ಯಾಪಕ ಹುದ್ದೆಯಲ್ಲಿ ಕಾರ್ಯನಿರ್ವಹಿಸಿದ್ದಾರೆ. ಇವರ ಸಹಪ್ರಾಧ್ಯಾಪಕ ಹುದ್ದೆಯ ಸೇವಾವಧಿಯನ್ನು ಪರಿಗಣಿಸಲು ಅನುಮೋದನೆಯನ್ನು ಕೋರಿ ದಿನಾಂಕ: 01.04.2017ರಂದು ನಡೆದ ಪ್ರಶಾಸನ ಸಮಿತಿ 37ನೇ ಸಭೆಯಲ್ಲಿ ಮಂಡಿಸಲಾಗಿತ್ತು. ಸಭೆಯು ಇವರ ಸೇವಾವಿವರಗಳನ್ನು ದಾಖಲೆಗಳೊಂದಿಗೆ ಮುಂದಿನ ಸಭೆಯಲ್ಲಿ ಮಂಡಿಸುವಂತೆ ನಿರ್ಣಯಿಸಿತ್ತು. ಅದರಂತೆ, ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ –ಇವರ ಸೇವಾಪುಸ್ತಕದ ಮೂಲಪ್ರತಿಯು ವಿಶ್ವವಿದ್ಯಾಲಯಕ್ಕೆ ಸ್ವೀಕೃತವಾಗಿದ್ದು, ಸಭೆಗೆ ಸಲ್ಲಿಸಿದೆ. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ನೇಮಕಾತಿ ಹೊಂದುವ ಪೂರ್ವದಲ್ಲಿಯೂ ಸಹಪ್ರಾಧ್ಯಾಪಕ ಹುದ್ದೆಯಲ್ಲಿಯೇ ಕಾರ್ಯನಿರ್ವಹಿಸಿರುವುದರಿಂದ ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ –ಇವರ ಹಿಂದಿನ ಸೇವಾವಧಿಯನ್ನು ಪರಿಗಣಿಸಲು ಸಭೆಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ ಅವರ ಹಿಂದಿನ ಸೇವಾವಧಿಯನ್ನು ಪರಿಗಣಿಸಲು ತಾತ್ವಿಕವಾಗಿ ಒಪ್ಪಿಗೆಯನ್ನು ನೀಡಿತು. ಆದರೆ, ಇದಕ್ಕೆ ಪೂರ್ವದಲ್ಲಿ ಡಾ. ವೀರನಾರಾಯಣ ಎನ್.ಕೆ. ಪಾಂಡುರಂಗಿ ಅವರ ಈವರೆಗಿನ ಎಲ್ಲಾ ಸೇವಾ ವಿವರಗಳನ್ನು ಸರ್ಕಾರದ 'ಸಿಬ್ಬಂದಿ ಮತ್ತು ಆಡಳಿತ ಸುಧಾರಣಾ ಇಲಾಖೆ'ಗೆ ಸಲ್ಲಿಸಿ, ಇಲಾಖೆಯ ಅಭಿಪ್ರಾಯವನ್ನು ಪಡೆದು, ನಿಯಮಾನುಸಾರ ಮುಂದಿನ ಸೂಕ್ತ ಕ್ರಮವನ್ನು ವಹಿಸುವಂತೆ ಸೂಚಿಸಿತು.** |
| ವಿಷಯ 02 | ವಿಷಯ ಮತ್ತು ಟಿಪ್ಪಣಿ | **ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನ ವಿದ್ಯಾರ್ಥಿನಿಲಯದಲ್ಲಿ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ತಾತ್ಕಾಲಿಕವಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸುವ ಬಗೆಗೆ.**<br>ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನಲ್ಲಿರುವ ಹಳೆಯ ವಿದ್ಯಾರ್ಥಿನಿಲಯದ ಸ್ಥಳದಲ್ಲಿ ಹೊಸದಾಗಿ ವಿದ್ಯಾರ್ಥಿನಿಲಯವನ್ನು ನಿರ್ಮಿಸಲು ದಿನಾಂಕ: 01.04.2017ರಂದು ನಡೆದ ಪ್ರಶಾಸನ ಸಮಿತಿ 37ನೇ ಸಭೆಯಲ್ಲಿ ಒಪ್ಪಿಗೆಯನ್ನು ಪಡೆಯಲಾಗಿತ್ತು. ಅದರಂತೆ, ದಿನಾಂಕ: 11.08.2017 ರಂದು ನಡೆದ 'ಕಟ್ಟಡ ಸಲಹಾ ಸಮಿತಿ' ಸಭೆಯು ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾಲಯಕ್ಕೆ ಬಿಡುಗಡೆಯಾಗಿರುವ ಎಸ್‌ಸಿಪಿ/ಟಿಎಸ್‌ಪಿ ಅನುದಾನವನ್ನು ಬಳಸಿಕೊಂಡು, ಪ್ರಸ್ತುತ ಇರುವ ಹಳೆಯ ವಿದ್ಯಾರ್ಥಿನಿಲಯವನ್ನು ಕೆಡವಿ, ಆ ಸ್ಥಳದಲ್ಲಿ ಹೊಸದಾಗಿ ಸುಸಜ್ಜಿತವಾದ ವಿದ್ಯಾರ್ಥಿನಿಲಯವನ್ನು ನಿರ್ಮಿಸಲು ನಿರ್ಣಯಿಸಿದೆ. ಈ ಹಿನ್ನೆಲೆಯಲ್ಲಿ ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನ ವಿದ್ಯಾರ್ಥಿನಿಲಯದಲ್ಲಿ 2017–18ನೇ ಸಾಲಿಗೆ ಪ್ರವೇಶ ಪಡೆದಿರುವ ವಿದ್ಯಾರ್ಥಿಗಳಿಗೆ ಹೊಸ ವಿದ್ಯಾರ್ಥಿನಿಲಯದ ಕಟ್ಟಡ ನಿರ್ಮಾಣವಾಗುವವರೆಗೆ, ಅಂದರೆ ಸುಮಾರು ಎಂಟು ತಿಂಗಳುಗಳವರೆಗೆ ತಾತ್ಕಾಲಿಕವಾಗಿ ಪರ್ಯಾಯ ವ್ಯವಸ್ಥೆಯನ್ನು ಮಾಡಬೇಕಾಗಿದೆ. ಮುಂದಿನ ಕ್ರಮವಹಿಸಲು ಪ್ರಶಾಸನ ಸಮಿತಿಯ ಅನುಮೋದನೆಗಾಗಿ ಮಂಡಿಸಿದೆ. |
| | ನಿರ್ಣಯ | **ಸಭೆಯು ವಿವರಗಳನ್ನು ಪರಿಶೀಲಿಸಿ, ಹೊಸ ವಿದ್ಯಾರ್ಥಿನಿಲಯವು ನಿರ್ಮಾಣವಾಗುವವರೆಗೆ ಶ್ರೀ ಚಾಮರಾಜೇಂದ್ರ ಸಂಸ್ಕೃತ ಕಾಲೇಜಿನ ವಿದ್ಯಾರ್ಥಿನಿಲಯದ ವಿದ್ಯಾರ್ಥಿಗಳಿಗೆ ತಾತ್ಕಾಲಿಕವಾಗಿ ಪರ್ಯಾಯ ವ್ಯವಸ್ಥೆ ಕಲ್ಪಿಸಲು ಮತ್ತು ಅದಕ್ಕೆ ತಗಲುವ ವೆಚ್ಚವನ್ನು ವಿಶ್ವವಿದ್ಯಾಲಯವು ಭರಿಸಲು ಒಪ್ಪಿಗೆಯನ್ನು ನೀಡಿತು.** |

| | | |
|---|---|---|
| ವಿಷಯ 03 | ವಿಷಯ ಮತ್ತು ಟಿಪ್ಪಣಿ | **'ಸಂಸ್ಕೃತ ಪುನಶ್ಚೇತನ ಕಾರ್ಯಾಗಾರ'ಕ್ಕೆ ತಗುಲಿದ ವೆಚ್ಚಕ್ಕೆ ಅನುಮೋದನೆ ನೀಡುವ ಬಗೆಗೆ.**<br>ಸಂಸ್ಕೃತ ಶಿಕ್ಷಣ ನಿರ್ದೇಶನಾಲಯದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಅನುದಾನಿತ ಸಂಸ್ಕತ ಪಾಠಶಾಲೆಗಳಲ್ಲಿನ ಪ.ಜಾತಿ, ಪ.ಪಂಗಡ ಹಾಗೂ ಪ್ರವರ್ಗ-1ಕ್ಕೆ ಸೇರಿದ ಶಿಕ್ಷಕರುಗಳ ಬೋಧನಾ ಸಾಮರ್ಥ್ಯವನ್ನು ಉತ್ತಮಪಡಿಸುವ ನಿಟ್ಟಿನಲ್ಲಿ ಹತ್ತು ದಿನಗಳ ಕಾಲ 'ಸಂಸ್ಕೃತ ಪುನಶ್ಚೇತನ ಕಾರ್ಯಾಗಾರ'ವನ್ನು ದಿನಾಂಕ: 13.07.2017ರಿಂದ 22.07.2017ರವರೆಗೆ ಹೊನ್ನಾವರದ ಶ್ರೀಕ್ಷೇತ್ರ ಬಂಗಾರಮಕ್ಕಿಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಈ ಕಾರ್ಯಾಗಾರಕ್ಕೆ ರೂ. 3.00 ಲಕ್ಷ ವೆಚ್ಚವಾಗಬಹುದೆಂದು ಅಂದಾಜಿಸಿ, ಈ ಅಂದಾಜು ಮೊತ್ತಕ್ಕೆ ದಿನಾಂಕ: 01.06.2017ರಂದು ನಡೆದ ಪ್ರಶಾಸನ ಸಮಿತಿ 38ನೇ ಸಭೆಯಲ್ಲಿ ಅನುಮೋದನೆಯನ್ನು ಪಡೆಯಲಾಗಿತ್ತು. ಈ ಕಾರ್ಯಾಗಾರಕ್ಕೆ ಒಟ್ಟಾರೆ ರೂ. 2,30,190/- (ಎರಡು ಲಕ್ಷದ ಮೂವತ್ತು ಸಾವಿರದ ಒಂದು ನೂರ ತೊಂಭತ್ತು ರೂಪಾಯಿ ಮಾತ್ರ)ಗಳು ವೆಚ್ಚವಾಗಿದ್ದು, ವೆಚ್ಚದ ವಿವರಗಳನ್ನು ಸಲ್ಲಿಸಿದೆ. ಕಾರ್ಯಾಗಾರಕ್ಕೆ ವೆಚ್ಚವಾದ ಒಟ್ಟು ಮೊತ್ತಕ್ಕೆ ಅನುಮೋದನೆಯನ್ನು ಕೋರಿ ಪ್ರಶಾಸನ ಸಮಿತಿ ಸಭೆಗೆ ಮಂಡಿಸಿದೆ. |
| | ನಿರ್ಣಯ | **ಸಭೆಯು ಕಾರ್ಯಾಗಾರವನ್ನು ಯಶಸ್ವಿಯಾಗಿ ನಡೆಸಿರುವುದಕ್ಕೆ ಅಭಿನಂದನೆಯನ್ನು ತಿಳಿಸಿ, ಕಾರ್ಯಾಗಾರಕ್ಕೆ ತಗುಲಿದ ಒಟ್ಟು ವೆಚ್ಚದ ಮೊತ್ತ ರೂ. 2,30,190/-ಗಳಿಗೆ ಅನುಮೋದನೆಯನ್ನು ನೀಡಿತು.** |

ಸಭೆಯ ಕೊನೆಯಲ್ಲಿ ಮಾನ್ಯ ಸದಸ್ಯರಾದ ಕ್ಯಾಪ್ಟನ್ ಗಣೇಶ್ ಕಾರ್ಣಿಕ್ ಅವರು ಮಾತನಾಡಿ, ರಾಜ್ಯಮಟ್ಟದ 'ಸಂಸ್ಕೃತ ನಾಟಕೋತ್ಸವ'ವನ್ನು ಧಾರವಾಡದಲ್ಲಿ ಯಶಸ್ವಿಯಾಗಿ ನಡೆಸಿರುವುದಕ್ಕೆ ಸಂಬಂಧಪಟ್ಟ ಎಲ್ಲಾ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗದವರಿಗೂ ಅಭಿನಂದನೆಯನ್ನು ಸಲ್ಲಿಸಿದರು. ಈ ನಾಟಕೋತ್ಸವದಲ್ಲಿ ಪ್ರದರ್ಶಿತವಾದ ಉತ್ತಮ ನಾಟಕಗಳೊಂದಿಗೆ ರಾಷ್ಟ್ರಮಟ್ಟದಲ್ಲಿ ಸಂಸ್ಕೃತ ನಾಟಕಗಳನ್ನು ಆಹ್ವಾನಿಸಿ 'ಸಂಸ್ಕೃತ ನಾಟಕೋತ್ಸವ'ವನ್ನು ಹಮ್ಮಿಕೊಳ್ಳುವುದು ಸೂಕ್ತ ಎಂದು ಅವರು ತಿಳಿಸಿದರು. ಅಲ್ಲದೇ, ಸಾಮಾಜಿಕ ಚಿಂತನೆ ಇರುವಂತಹ ಉತ್ತಮ ಕನ್ನಡ ನಾಟಕಗಳನ್ನು ಸಂಸ್ಕೃತಕ್ಕೆ ಅನುವಾದಿಸಿ, ರಂಗಾಯಣ ಹಾಗೂ ರಂಗಭೂಮಿಯ ಕಲಾವಿದರನ್ನು ಬಳಸಿಕೊಂಡು ನಾಟಕ ಪ್ರದರ್ಶನಕ್ಕೆ ಅವಕಾಶ ಕಲ್ಪಿಸಬೇಕೆಂದರು. ಇದರಿಂದ ಸಂಸ್ಕೃತದೆಡೆಗೆ ಸಾಮಾನ್ಯ ಜನರನ್ನು ಹೆಚ್ಚು ಆಕರ್ಷಿಸಬಹುದಾಗಿದೆ ಎಂದು ಭಾವಿಸಿದರು. ಮಾನ್ಯ ಕುಲಪತಿಗಳು ಈ ಬಗ್ಗೆ ಪ್ರಾಮಾಣಿಕ ಪ್ರಯತ್ನ ವಹಿಸುವುದಾಗಿ ಸಭೆಗೆ ತಿಳಿಸಿದರು.

**ಶ್ರೀಮತಿ ಎಂ. ಶಿಲ್ಪ, ಕೆ.ಎ.ಎಸ್.**
ಸದಸ್ಯ ಕಾರ್ಯದರ್ಶಿ

**ಪ್ರೊ. ಪದ್ಮಾಶೇಖರ್**
ಅಧ್ಯಕ್ಷರು